**Akashvani : Bangalore**
**National Bulletin In Kannada**
**01.07.2024 / 13.10 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**01.07.2024 13.10 hrs**

<><*<><>*><>

**ಮುಖ್ಯಾಂಶಗಳು**

೧. ಭಾರತೀಯ ನ್ಯಾಯ ಸಂಹಿತಾ-೨೦೨೩, ಭಾರತೀಯ ನಾಗರೀಕ ಸುರಕ್ಷಾ ಸಂಹಿತಾ-೨೦೨೩, ಭಾರತೀಯ ಸಾಕ್ಷ್ಯ ಅಧಿನಿಯಮ-೨೦೨೩ ಕಾಯ್ದೆಗಳು ಇಂದಿನಿಂದ ಜಾರಿಗೆ

೨. ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆ ೩೦ ರೂಪಾಯಿ ಕಡಿತ

೩. ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ ಯಿಂದ ಇಂದು ೧೫೬೩ ಅಭ್ಯರ್ಥಿಗಳ ಪರಿಷ್ಕೃತ ಫಲಿತಾಂಶ, ಮರು-ಪರೀಕ್ಷೆಯ ನಂತರ ಅಭ್ಯರ್ಥಿಗಳ ಶ್ರೇಣಿ ಪ್ರಕಟ

೪. ಯುರೋ ಕಪ್ ಫುಟ್‌ಬಾಲ್ ಪಂದ್ಯಾವಳಿಯಲ್ಲಿ ಸ್ಪೇನ್ ತಂಡಕ್ಕೆ ಜಾರ್ಜಿಯಾ ವಿರುದ್ಧ, ಇಂಗ್ಲೆಂಡ್ ತಂಡಕ್ಕೆ ಸ್ಲೋವಾಕಿಯಾ ವಿರುದ್ಧ ಭರ್ಜರಿ ಗೆಲುವು

<><*<><>*><>

ಹೊಸ ಮೂರು ಅಪರಾಧ ಕಾಯ್ದೆಗಳು ಇಂದಿನಿಂದ ಜಾರಿಗೆ ಬರಲಿದೆ. ಭಾರತೀಯ ನ್ಯಾಯ ಸಂಹಿತಾ-೨೦೨೩, ಭಾರತೀಯ ನಾಗರೀಕ ಸುರಕ್ಷಾ ಸಂಹಿತಾ-೨೦೨೩, ಭಾರತೀಯ ಸಾಕ್ಷ್ಯ ಅಧಿನಿಯಮ-೨೦೨೩ ಇಂದಿನಿಂದ ಜಾರಿಗೆ ಬರಲಿದೆ. ಕಳೆದ ವರ್ಷ ಚಳಿಗಾಲದ ಅಧಿವೇಶನದಲ್ಲಿ ಈ ಮಸೂದೆಗಳನ್ನು ಸಂಸತ್ತಿನಲ್ಲಿ ಅಂಗೀಕರಿಸಲಾಗಿತ್ತು. ಹೊಸ ಕ್ರಿಮಿನಲ್ ಕಾನೂನುಗಳು ಭಾರತೀಯ ನಾಗರಿಕರನ್ನು ಸಬಲೀಕರಣಗೊಳಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಈ ಕಾನೂನುಗಳು ಎಲ್ಲರಿಗೂ ಹೆಚ್ಚು ಬೆಂಬಲ ನೀಡುವ ಮತ್ತು ಸಮರ್ಥ ನ್ಯಾಯ ವ್ಯವಸ್ಥೆಯನ್ನು ರಚಿಸುವ ಗುರಿಯನ್ನು ಹೊಂದಿವೆ. ಹೊಸ ಕ್ರಿಮಿನಲ್ ಕಾನೂನುಗಳಡಿ ಘಟನೆಗಳನ್ನು ಆನ್‌ಲೈನ್‌ನಲ್ಲಿ ವರದಿ ಮಾಡುವುದು, ಯಾವುದೇ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸುವುದು ಮತ್ತು ಸಂತ್ರಸ್ತರು ಎಫ್‌ಐಆರ್‌ನ ಉಚಿತ ನಕಲನ್ನು ಪಡೆಯಬಹುದಾಗಿದೆ. ಬಂಧನದ ಸಂದರ್ಭದಲ್ಲಿ, ವ್ಯಕ್ತಿಯು ತನ್ನ ಆಯ್ಕೆಯ ವ್ಯಕ್ತಿಗೆ ಅವರ ಪರಿಸ್ಥಿತಿಯ ಬಗ್ಗೆ ತಿಳಿಸುವ ಹಕ್ಕನ್ನು ಹೊಂದಿರುತ್ತಾನೆ. ಹೊಸ ಕಾನೂನುಗಳು ಮಹಿಳೆಯರು ಮತ್ತು ಮಕ್ಕಳ ವಿರುದ್ಧದ ಅಪರಾಧಗಳ ತನಿಖೆಗೆ ಆದ್ಯತೆ ನೀಡಿವೆ, ಮಾಹಿತಿಯನ್ನು ದಾಖಲಿಸಿದ ಎರಡು ತಿಂಗಳೊಳಗೆ ತನಿಖೆಯನ್ನು ಪೂರ್ಣಗೊಳಿಸಲು ಕಾಲಮಿತಿ ನಿಗದಿಪಡಿಸಿದೆ. ಹೊಸ ಕ್ರಿಮಿನಲ್ ಕಾನೂನುಗಳಲ್ಲಿ, ಫೋರೆನ್ಸಿಕ್ ತಜ್ಞರು ಗಂಭೀರ ಅಪರಾಧಗಳಿಗೆ ಅಪರಾಧದ ಸ್ಥಳಗಳಿಗೆ ಭೇಟಿ ನೀಡುವುದು ಮತ್ತು ಸಾಕ್ಷ್ಯವನ್ನು ಸಂಗ್ರಹಿಸುವುದು ಕಡ್ಡಾಯವಾಗಿದೆ. ಸಮನ್ಸ್ ಅನ್ನು ಈಗ ವಿದ್ಯುನ್ಮಾನವಾಗಿ ಸಲ್ಲಿಸಬಹುದು, ಕಾನೂನು ಪ್ರಕ್ರಿಯೆಗಳನ್ನು ತ್ವರಿತಗೊಳಿಸಬಹುದು, ದಾಖಲೆಗಳನ್ನು ಕಡಿಮೆ ಮಾಡಬಹುದು ಮತ್ತು ಸಮರ್ಥ ಸಂವಹನಕ್ಕೆ ಆದ್ಯತೆ ನೀಡಲಾಗಿದೆ. ಹೊಸ ಕ್ರಿಮಿನಲ್ ಕಾನೂನುಗಳನ್ನು ಜಾರಿಗೆ ತರಲು, ವ್ಯವಸ್ಥೆಯಲ್ಲಿ ಸುಗಮ ಪರಿವರ್ತನೆಗಾಗಿ ಪೊಲೀಸ್ ಮತ್ತು ತನಿಖಾ ಅಧಿಕಾರಿಗಳಿಗೆ ತರಬೇತಿ ನೀಡಲಾಗಿದೆ. ದೂರದರ್ಶನ ಮತ್ತು ಆಕಾಶವಾಣಿಯ ಸುದ್ದಿ ಬುಲೆಟಿನ್‌ಗಳು, ಕಾರ್ಯಕ್ರಮಗಳು ಮತ್ತು ಚರ್ಚೆಗಳು ಮತ್ತು ಸಾಮಾಜಿಕ ಮಾಧ್ಯಮ ವೇದಿಕೆಗಳ ಮೂಲಕ ಚರ್ಚೆಗಳು ಮತ್ತು ಆಳವಾದ ವಿಶ್ಲೇಷಣೆ ಪ್ರಸಾರ ಮಾಡಲಾಗುತ್ತಿದೆ. ಸಾರ್ವಜನಿಕ ಜಾಗೃತಿ,

ಸಂವಾದ ಕಾರ್ಯಕ್ರಮಗಳು, ಮಾಹಿತಿ ವೆಬ್‌ಸೈಟ್‌ಗಳು, ಸಚಿವರ ಮಟ್ಟದ ವೆಬಿನಾರ್‌ಗಳನ್ನು ಸಹ ನಡೆಸಲಾಗಿದೆ. ಹೆಚ್ಚುವರಿಯಾಗಿ, ಶಾಲೆ ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಕೋರ್ಸ್ ಮಾಡ್ಯೂಲ್‌ಗಳನ್ನು ಕಡ್ಡಾಯವಾಗಿ ಸೇರಿಸುವುದು ಸೇರಿದಂತೆ ಹಲವು ಉಪ ಕ್ರಮಗಳನ್ನು ಕೈಗೊಳ್ಳಲಾಗಿದೆ. ವಿಶ್ವವಿದ್ಯಾನಿಲಯ ಧನಸಹಾಯ ಆಯೋಗ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ ಮತ್ತು ಸಿಎಫ್‌ಐಗಳು ಮತ್ತು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿನ ಎಲ್ಲಾ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಒಂದು ದಿನದ ಚಟುವಟಿಕೆ ಆಯೋಜಿಸಲಾಗಿದೆ.

ಇದರಲ್ಲಿ ಗುಂಪು ಚರ್ಚೆಗಳು, ಕಾರ್ಯಾಗಾರಗಳು, ಪ್ರಶ್ನೋತ್ತರ ಅವಧಿಗಳು, ವಿವಿಧ ವಿಷಯಗಳ ಕುರಿತು ರಸಪ್ರಶ್ನೆಗಳು ಸೇರಿವೆ ಎಂದು ಮೂಲಗಳು ತಿಳಿಸಿವೆ. ಈ ಮೂರು ಕ್ರಿಮಿನಲ್ ಕಾನೂನುಗಳ ಪ್ರಾರಂಭದೊಂದಿಗೆ, ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಪ್ರತಿ ಪೊಲೀಸ್ ಠಾಣೆಯ ಪ್ರಭಾರ ಅಧಿಕಾರಿಯಿಂದ ಹೊಸ ಕ್ರಿಮಿನಲ್ ಕಾನೂನುಗಳ ಬಗ್ಗೆ ಮಾಹಿತಿ ನೀಡುವ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಹೊಸ ಕಾನೂನು ಬಗ್ಗೆ ಮಾತನಾಡಿದ ಕೇಂದ್ರ ಕಾನೂನು ಮತ್ತು ನ್ಯಾಯ ಖಾತೆ ಸಚಿವ ಅರ್ಜುನ್ ರಾಮ್ ಮೇಘ್ವಾಲ್, ಇದರಲ್ಲಿ ನ್ಯಾಯದಾನಕ್ಕೆ ಹೆಚ್ಚು ಒತ್ತು ನೀಡಲಾಗಿದೆ ಎಂದಿದ್ದಾರೆ. ಮುಂಬೈನಲ್ಲಿ ಅಪರಾಧ ನ್ಯಾಯ ವ್ಯವಸ್ಥೆಯ ನಿರ್ವಹಣೆಯಲ್ಲಿ ಭಾರತದ ಪ್ರಗತಿಪರ ಪಥ ಕುರಿತಂತೆ ಏರ್ಪಡಿಸಲಾಗಿದ್ದ ಸಮಾವೇಶದಲ್ಲಿ ಅವರು ಮಾತನಾಡಿದರು. ಹಳೆಯ ಕಾನೂನುಗಳು ಶಿಕ್ಷೆ ಬಗ್ಗೆ ಹೆಚ್ಚು ಕೇಂದ್ರೀಕೃತವಾಗಿದ್ದವು. ಇದಕ್ಕೆ ವ್ಯತಿರಿಕ್ತವಾಗಿ ಹೊಸ ಕಾನೂನಿನಲ್ಲಿ ನ್ಯಾಯಕ್ಕೆ ಪ್ರಾಧಾನ್ಯತೆ ನೀಡಲಾಗಿದೆ. ಭಾರತೀಯ ನ್ಯಾಯ ಸಂಹಿತಾ-೨೦೨೩, ಭಾರತೀಯ ನಾಗರೀಕ ಸುರಕ್ಷಾ ಸಂಹಿತಾ-೨೦೨೩, ಭಾರತೀಯ ಸಾಕ್ಷ್ಯ ಅಧಿನಿಯಮ-೨೦೨೩, ಈ ಮೂರು ಕಾನೂನುಗಳ ಬಗ್ಗೆ ಅರಿವು ಮೂಡಿಸುವ ವಿಶೇಷ ಸಮಾವೇಶಗಳನ್ನು ಮುಂದಿನ ದಿನಗಳಲ್ಲಿಯೂ ಆಯೋಜಿಸುವ ಚಿಂತನೆ ಇದೆ ಎಂದು ಸಚಿವ ಅರ್ಜುನ್ ರಾಮ್ ಮೇಘ್ವಾಲ್ ಹೇಳಿದರು.

<><*<><>*><>

ತೈಲ ಮಾರುಕಟ್ಟೆ ಕಂಪನಿಗಳು ವಾಣಿಜ್ಯ ಎಲ್‌ಪಿಜಿ ಗ್ಯಾಸ್ ಸಿಲಿಂಡರ್‌ಗಳ ಬೆಲೆಯನ್ನು ೩೦ ರೂಪಾಯಿ ಕಡಿತಗೊಳಿಸಿವೆ. ೧೯ ಕಿಲೋಗ್ರಾಂ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆ ಬದಲಾವಣೆ ಇಂದಿನಿಂದ ಜಾರಿಗೆ ಬರಲಿದೆ. ಬೆಲೆ ಕುಸಿತದಿಂದಾಗಿ, ದೆಹಲಿಯಲ್ಲಿ ೧೯ ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಚಿಲ್ಲರೆ ಮಾರಾಟ ಬೆಲೆ ಒಂದು ಸಾವಿರದ ೬೪೬ ರೂಪಾಯಿ ಆಗಿದೆ.

<><*<><>*><>

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಎನ್‌ಟಿಎ ಇಂದು ೧೫೬೩ ಅಭ್ಯರ್ಥಿಗಳ ಪರಿಷ್ಕೃತ ಫಲಿತಾಂಶವನ್ನು ಮತ್ತು ಮರು-ಪರೀಕ್ಷೆಯ ನಂತರ ನೀಟ್ ಪರೀಕ್ಷೆಯ ಎಲ್ಲಾ ಅಭ್ಯರ್ಥಿಗಳ ಶ್ರೇಣಿಯನ್ನು ಪ್ರಕಟಿಸಿದೆ. ಎಲ್ಲಾ ಅಭ್ಯರ್ಥಿಗಳ ಪರಿಷ್ಕೃತ ಸ್ಕೋರ್ ಕಾರ್ಡ್‌ಗಳು ವೆಬ್‌ಸೈಟ್‌ನಲ್ಲಿ ಲಭ್ಯವಿದೆ ಎಂದು ಎನ್‌ಟಿಎ ಪ್ರಕಟಣೆಯಲ್ಲಿ ತಿಳಿಸಿದೆ. ಅಭ್ಯರ್ಥಿಗಳು ವೆಬ್‌ಸೈಟ್‌ಗೆ ಲಾಗಿನ್ ಮಾಡಬಹುದು ಮತ್ತು ತಮ್ಮ ಪರಿಷ್ಕೃತ ಸ್ಕೋರ್ ಕಾರ್ಡ್‌ಗಳನ್ನು ವೆಬ್‌ಸೈಟ್‌ನಲ್ಲಿ ನೋಡಬಹುದಾಗಿದೆ.

<><*<><>*><>

ದೆಹಲಿ ವಿಮಾನ ನಿಲ್ದಾಣದ ಟರ್ಮಿನಲ್ ೧ ಚಾವಣಿ ಕುಸಿತದ ನಂತರ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು ದೆಹಲಿಯ ಐಜಿಐ ವಿಮಾನ ನಿಲ್ದಾಣದಲ್ಲಿ ಏರ್‌ಪೋರ್ಟ್ ಆಪರೇಷನ್ ಕಂಟ್ರೋಲ್ ಸೆಂಟರ್ ಅನ್ನು ಪರಿಶೀಲಿಸಿದರು. ಟರ್ಮಿನಲ್ ೧ ರಿಂದ ಟರ್ಮಿನಲ್ ೨ ಮತ್ತು ೩ರ ಪ್ರಸ್ತುತ ಕಾರ್ಯಾಚರಣೆಗಳು ಮತ್ತು ಪ್ರಯಾಣಿಕರ ನಿರ್ವಹಣೆಯನ್ನು ಸಚಿವರು

ಪರಿಶೀಲಿಸಿದರು. ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯ ಮತ್ತು ಏರ್‌ಲೈನ್ ಆಪರೇಟರ್‌ಗಳ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಸಮಗ್ರ ಮೌಲ್ಯಮಾಪನ ಸುಗಮ ಕಾರ್ಯನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಹೆಚ್ಚಿದ ಪ್ರಯಾಣಿಕರ ಹರಿವನ್ನು ನಿರ್ವಹಿಸಲು ಹೆಚ್ಚುವರಿ ಸಿಬ್ಬಂದಿ ನಿಯೋಜಿಸಲು ವಿವರವಾದ ಚರ್ಚೆಗಳನ್ನು ಸಹ ನಡೆಸಲಾಯಿತು. ವಿಮಾನಯಾನ ಸಂಸ್ಥೆಗಳ ನಡುವೆ ನಿಕಟ ಸಮನ್ವಯವನ್ನು ಸುಲಭಗೊಳಿಸಲು ಹಾಗೂ ವಾರ್ ರೂಮ್‌ಗಳ ಸಕ್ರಿಯಗೊಳಿಸಲು ಕ್ರಮ ಕೈಗೊಳ್ಳಲಾಗಿದೆ. ತಡೆರಹಿತ ಕಾರ್ಯಾಚರಣೆಗಳನ್ನು ಖಚಿತಪಡಿಸಿಕೊಳ್ಳಲು ಮತ್ತು ಪ್ರಯಾಣಿಕರ ಸುರಕ್ಷತೆಗೆ ಆದ್ಯತೆ ನೀಡಲು ಕಠಿಣ ಮಾನದಂಡಗಳನ್ನು ಕಾಪಾಡಿಕೊಳ್ಳಲು ಎಲ್ಲಾ ಮಧ್ಯಸ್ಥಗಾರರಿಗೆ ವಿಮಾನಯಾನ ಸಚಿವರು ಸಲಹೆ ನೀಡಿದ್ದಾರೆ.

<><*<><>*><>

ಕಣಿವೆ ರಾಜ್ಯ ಜಮ್ಮು ಕಾಶ್ಮೀರದಲ್ಲಿ ಅಮರನಾಥ ಯಾತ್ರೆ ಆರಂಭವಾಗಿದೆ. ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಶ್ರೀನಗರದ ಹೊರವಲಯದಲ್ಲಿರುವ ಪಂಥಾ ಚೌಕ್‌ನಲ್ಲಿರುವ ಅಮರನಾಥ ಜೀ ಯಾತ್ರಾ ಶಿಬಿರಕ್ಕೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿದರು. ಲೆಫ್ಟಿನೆಂಟ್ ಗವರ್ನರ್ ಅವರು ಯಾತ್ರಾರ್ಥಿಗಳು ಮತ್ತು ಸೇವಾ ಪೂರೈಕೆದಾರರೊಂದಿಗೆ ಸಂವಾದ ನಡೆಸಿದರು ಮತ್ತು ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಇದಕ್ಕೂ ಮೊದಲು, ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಸ್ಥಳ ಪರಿಶೀಲನೆ ನಡೆಸಿದರು. ಪಂಥಾ ಚೌಕ್‌ನಲ್ಲಿ ನಡೆಯುತ್ತಿರುವ ಪುಣ್ಯಕ್ಷೇತ್ರ ಮಂಡಳಿಯ ಯಾತ್ರಿ ನಿವಾಸ, ಕಚೇರಿಯ ನಿರ್ಮಾಣ ಕಾಮಗಾರಿಯನ್ನು ಅವರು ಪರಿಶೀಲಿಸಿದರು. ಕೊಠಡಿಗಳು ಮತ್ತು ವಸತಿ ನಿಲಯಗಳು ಸೇರಿದಂತೆ ವಿವಿಧ ವಿಭಾಗಗಳಿಗೆ ಭೇಟಿ ನೀಡಿ, ಸೌಲಭ್ಯದಲ್ಲಿ ಹೆಚ್ಚಿನ ಯಾತ್ರಿಕರಿಗೆ ಅವಕಾಶ ಕಲ್ಪಿಸುವ ಸಾಮರ್ಥ್ಯವನ್ನು ಹೆಚ್ಚಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ನಿರ್ದೇಶನ ನೀಡಿದರು.

<><*<><>*><>

ಆಕಾಶವಾಣಿಯ ದ್ವಿಭಾಷಾ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಇಂದು ರಾತ್ರಿ ೯.೩೦ಕ್ಕೆ ಪ್ರಧಾನಮಂತ್ರಿ ಆವಾಸ್ ಯೋಜನೆ ಎಲ್ಲರ ಮನೆಯ ಕನಸನ್ನು ಸಾಕಾರಗೊಳಿಸುತ್ತದೆ ಎಂಬ ಚರ್ಚೆ ಪ್ರಸಾರವಾಗಲಿದೆ. ಈ ಚರ್ಚೆಯಲ್ಲಿ ಗ್ರಾಮೀಣ ಅಭಿವೃದ್ಧಿ ಸಚಿವಾಲಯದ ಉಪ ಮಹಾನಿರ್ದೇಶಕ ಗಯಾ ಪ್ರಸಾದ್, ವಸತಿ ಹಾಗೂ ನಗರ ವ್ಯವಹಾರ ಸಚಿವಾಲಯದ ಜಂಟಿ ಕಾರ್ಯದರ್ಶಿ ಕುಲ್‌ದೀಪ್ ನಾರಾಯಣ್ ಭಾಗವಹಿಸಲಿದ್ದಾರೆ. ಪ್ರಧಾನಮಂತ್ರಿ ಆವಾಸ ಯೋಜನೆಯ ಬಗ್ಗೆ ಶ್ರೋತೃಗಳು ಪ್ರಶ್ನೆಗಳನ್ನು ಕೇಳಬಹುದಾಗಿದೆ. ಇಂದು ರಾತ್ರಿ ೯.೩೦ರಿಂದ ದೂರವಾಣಿ ಸಂಖ್ಯೆ ೦೧೧ -೨೩೪೨೧೦೫೦ ಮತ್ತು ೦೧೧-೨೩೩೧೪೪೪೪ ಕ್ಕೆ ಕರೆ ಮಾಡಿ ಪ್ರಶ್ನೆಗಳನ್ನು ಕೇಳಬಹುದಾಗಿದೆ. ಕೇಳುಗರು ೯೨೮೯೮೪೦೪೪ ಈ ವಾಟ್ಸಾಪ್ ಸಂಖ್ಯೆಗೂ ತಮ್ಮ ಸಂದೇಹಗಳನ್ನು ಕಳುಹಿಸಬಹುದಾಗಿದೆ. ಈ ಕಾರ್ಯಕ್ರಮವನ್ನು ಆಕಾಶವಾಣಿಯ ಗೋಲ್ಡ್ ಚಾನಲ್ ಮತ್ತು ಹೆಚ್ಚುವರಿ ತರಂಗಾಂತರಗಳಲ್ಲೂ ಆಲಿಸಬಹುದಾಗಿದೆ. ಆಕಾಶವಾಣಿಯ ವೆಬ್‌ಸೈಟ್, ನ್ಯೂಸ್ ಆನ್ ಏರ್ ಡಾಟ್ ಜಿಒವಿ ಡಾಟ್ ಇನ್ ಮತ್ತು ಯೂಟ್ಯೂಬ್ ಚಾನಲ್, ನ್ಯೂಸ್ ಆನ್ ಏರ್ ಅಫಿಷಿಯಲ್‌ನಲ್ಲೂ ಕಾರ್ಯಕ್ರಮ ಲಭ್ಯವಿರಲಿದೆ.

<><*<><>*><>

ಮುಂದಿನ ೩ ರಿಂದ ೪ ದಿನಗಳಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆ ಇದೆ. ಈ ಹಿನ್ನೆಲೆಯಲ್ಲಿ ವಾಯುವ್ಯ, ಪೂರ್ವ ಮತ್ತು ಈಶಾನ್ಯ ಭಾರತದಲ್ಲಿ ಭಾರತೀಯ ಹವಾಮಾನ ಇಲಾಖೆಯು ಆರೆಂಜ್ ಮತ್ತು ರೆಡ್ ಅಲರ್ಟ್ ನೀಡಿದೆ.

<><*<><>*><>

ಶ್ರೀಲಂಕಾದ ಹಿರಿಯ ರಾಜಕಾರಣಿ ಮತ್ತು ತಮಿಳು ರಾಷ್ಟ್ರೀಯ ಒಕ್ಕೂಟದ (ಟಿಎನ್‌ಎ) ನಾಯಕ ಆರ್ ಸಂಪಂತನ್ ಅವರ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ವ್ಯಕ್ತಪಡಿಸಿದ್ದಾರೆ. ಶ್ರೀಲಂಕಾ ತಮಿಳು ಪ್ರಜೆಗಳಿಗೆ ಶಾಂತಿ, ಭದ್ರತೆ, ಸಮಾನತೆ, ನ್ಯಾಯ ಮತ್ತು ಘನತೆಯ ಜೀವನವನ್ನು ಆರ್.ಸಂಪಂತನ್ ಪಟ್ಟುಬಿಡದೆ ಅನುಸರಿಸಿದರು ಎಂದ ಪ್ರಧಾನಿ ಅವರು, ಅವರ ಕುಟುಂಬ ಮತ್ತು ಸ್ನೇಹತರಿಗೆ ಸಂತಾಪ ಸೂಚಿಸಿದರು. ಶ್ರೀಲಂಕಾ ಸಂಸತ್ತಿಗೆ ಆರು ಬಾರಿ ಆಯ್ಕೆಯಾದರು ಮತ್ತು ವಿರೋಧ ಪಕ್ಷದ ನಾಯಕರಾಗಿಯೂ ಸೇವೆ ಸಲ್ಲಿಸಿದರು ಎಂದು ಸ್ಮರಿಸಿಕೊಂಡಿರು.

<><*<><>*><>

ಯುರೋ ಕಪ್-೨೦೨೪, ಫುಟ್‌ಬಾಲ್ ಪಂದ್ಯದಲ್ಲಿ ಸ್ಪೇನ್ ತಂಡ ಜಾರ್ಜಿಯಾ ತಂಡದ ವಿರುದ್ಧ ೪-೧ ಗೋಲುಗಳ ಅಂತರದಿಂದ ಜಯಗಳಿಸಿದೆ. ಸ್ಪೇನ್‌ನ ರಾಬಿನ್ ಲೆ ನಾರ್ಮಂಡ್ ಅವರ ಸ್ವಂತ ಗೋಲು ಜಾರ್ಜಿಯಾಕ್ಕೆ ಅಚ್ಚರಿಯ ಮುನ್ನಡೆ ನೀಡಿತು. ಜಾರ್ಜಿಯಾ ವಿರುದ್ಧ ಸ್ಪೇನ್ ಪ್ರಬಲ ಪ್ರದರ್ಶನ ನೀಡಿ, ಜರ್ಮನಿ ವಿರುದ್ಧ ಕ್ವಾರ್ಟರ್ ಫೈನಲ್‌ನಲ್ಲಿ ಸ್ಥಾನ ಪಡೆದುಕೊಂಡಿತು. ಜರ್ಮನಿಯ ವೆಲ್ಟಿನ್ಸ್ ಅರೆನಾದಲ್ಲಿ ನಡೆದ ಮತ್ತೊಂದು ಪಂದ್ಯದಲ್ಲಿ ಇಂಗ್ಲೆಂಡ್ ತಂಡ ೨-೧ ಗೋಲುಗಳಿಂದ ಸ್ಲೋವಾಕಿಯಾವನ್ನು ಸೋಲಿಸಿತು.

<><*<><>*><>

ಚೆನ್ನೈನ ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ದಕ್ಷಿಣ ಆಫ್ರಿಕಾ ಮಹಿಳಾ ತಂಡ ನಡುವಿನ ಟೆಸ್ಟ್ ಕ್ರಿಕೆಟ್ ಪಂದ್ಯದಲ್ಲಿ ಭಾರತ ಮೇಲುಗೈ ಸಾಧಿಸಿದೆ. ನಾಲ್ಕನೇ ದಿನದಾಟದ ಭೋಜನ ವಿರಾಮದ ವೇಳೆಗೆ ದಕ್ಷಿಣ ಆಫ್ರಿಕಾ ತಂಡ ೫ ವಿಕೆಟ್ ನಷ್ಟಕ್ಕೆ ೩೦೨ ರನ್ ಗಳಿಸಿದೆ. ದಕ್ಷಿಣ ಆಫ್ರಿಕಾ ತಂಡ ೩೫ ರನ್ ಹಿನ್ನಡೆಯಲ್ಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೨.೩೦ ಕ್ಕೆ <>*><>